**Bangalore**
**Regional News**
**21.04.2025 / 14.30 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಸರ್ಕಾರಿ ನೌಕರರ ಪ್ರಾಮಾಣಿಕ ಕರ್ತವ್ಯಪ್ರಜ್ಞೆಯಿಂದ ರಾಜ್ಯದ ಆರ್ಥಿಕ ಪ್ರಗತಿ - ಮುಖ್ಯಮಂತ್ರಿ ಸಿದ್ಧರಾಮಯ್ಯ

೨. ನಿವೃತ್ತ ಡಿಜಿಪಿ ಓಂ ಪ್ರಕಾಶ್ ಹತ್ಯೆ ಪ್ರಕರಣ; ವಿವಿಧ ಆಯಾಮಗಳಲ್ಲಿ ತನಿಖೆ- ಗೃಹ ಸಚಿವ ಡಾ.ಜಿ.ಪರಮೇಶ್ವರ್

೩. ಹದಿನೆಂಟು ಬಿಜೆಪಿ ಶಾಸಕರ ಅಮಾನತು ಪ್ರಕರಣ; ಆದೇಶ ಹಿಂಪಡೆಯುವಂತೆ ಸಭಾಧ್ಯಕ್ಷರಿಗೆ ಬಿಜೆಪಿ ಮನವಿ

೪. ಬೆಲೆ ಏರಿಕೆ ವಿರುದ್ಧ ದಾವಣಗೆರೆಯಲ್ಲಿ ಬಿಜೆಪಿ ಜನಾಕ್ರೋಶ ಯಾತ್ರೆ

<><*<><>*><>

ಕರ್ನಾಟಕ ಪ್ರಗತಿಪರ ರಾಜ್ಯವಾಗಿದ್ದು ಬಹುತೇಕ ಸರ್ಕಾರಿ ನೌಕರರ ಪ್ರಾಮಾಣಿಕ ಕರ್ತವ್ಯಪ್ರಜ್ಞೆಯಿಂದ ರಾಜ್ಯ ಆರ್ಥಿಕವಾಗಿ ಪ್ರಗತಿ ಸಾಧಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಸಿಬ್ಬಂದಿ ಮತ್ತು ಆಡಳಿತಾ ಸುಧಾರಣಾ ಇಲಾಖೆ, ರಾಜ್ಯ ಸರ್ಕಾರಿ ನೌಕರರ ಸಂಘ, ಆಯೋಜಿಸಿದ್ದ ರಾಜ್ಯ ಸರ್ಕಾರಿ ನೌಕರರ ದಿನಾಚರಣೆ ಉದ್ಘಾಟಿಸಿ, ರಾಜ್ಯಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಮಾಡಿ ಅವರು ಮಾತನಾಡಿದರು. ಸರ್ಕಾರಿ ನೌಕರರಿಂದಲೇ ರಾಜ್ಯ ಜಿಎಸ್‌ಟಿ ಸಂಗ್ರಹದಲ್ಲಿ ದೇಶದಲ್ಲೇ ಎರಡನೇ ರಾಜ್ಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ೫ ಕೋಟಿ ೫ ಲಕ್ಷ ಸರ್ಕಾರಿ ನೌಕರರಿಗೆ ಇವತ್ತಿನ ಪ್ರಶಸ್ತಿ ಪುರಸ್ಕೃತರು ಸ್ಫೂರ್ತಿಯಾಗಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಪ್ರಶಸ್ತಿ ಪುರಸ್ಕೃತರ ಜವಾಬ್ದಾರಿ ಈಗ ಹೆಚ್ಚಾಗಿದ್ದು, ಎಲ್ಲಾ ಸರ್ಕಾರಿ ನೌಕರರು ಕರ್ತವ್ಯಪ್ರಜ್ಞೆ ಹೆಚ್ಚಿಸಿಕೊಂಡು ಜನರ ಸೇವೆಯನ್ನು ಪರಿಣಾಮಕಾರಿಯಾಗಿ ನಿರ್ವಹಿಸಬೇಕು ಎಂದು ಕಿವಿಮಾತು ಹೇಳಿದ್ದಾರೆ.

<><*<><>*><>

ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸುವ ಸರ್ಕಾರಿ ಅಧಿಕಾರಿಗಳು ಮತ್ತು ನೌಕರರ ನೈತಿಕ ಸ್ಥೈರ್ಯ ಕುಗ್ಗಿಸುವುದು ಸರಿಯಲ್ಲ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಸಾರ್ವಜನಿಕರನ್ನು ಪದೇ ಪದೇ ಕಚೇರಿಗಳಿಗೆ ಅಲೆಯುವಂತೆ ಮಾಡಬಾರದು ಎಂದು ಸರ್ಕಾರಿ ನೌಕರರಿಗೆ  ಕಿವಿ ಮಾತು ಹೇಳಿದ್ದಾರೆ.

ಧ್ವನಿ: ಡಾ.ಎಂ.ಸಿ.ಸುಧಾಕರ್ (  ೨೪  ಸೆಕೆಂಡ್ಸ್ )

ಜಿಲ್ಲೆಯಲ್ಲಿ ಉತ್ತಮ ಸೇವೆ ಸಲ್ಲಿಸಿದ ವಿವಿಧ ಇಲಾಖೆಗಳ ೯ ಸರ್ಕಾರಿ ನೌಕರರಿಗೆ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಯನ್ನು ಪ್ರದಾನ ಮಾಡಿ  ಸಮಾರಂಭದಲ್ಲಿ ಗೌರವಿಸಲಾಯಿತು.

<><*<><>*><>

ಮೂಲ ಪ್ರತಿ ಇಲ್ಲದೇ ಜಾತಿಗಣತಿ  ವರದಿ ಸಿದ್ಧಪಡಿಸಲು ಹೇಗೆ ಸಾಧ್ಯ. ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಪ್ರಶ್ನಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿಪಕ್ಷ ನಾಯಕರು ಅನಾವಶ್ಯಕ ಆರೋಪಗಳನ್ನು ಮಾಡುವುದರಿಂದ ಯಾವುದೇ ಪ್ರಯೋಜನವಿಲ್ಲ ಎಂದು ಹೇಳಿದ್ದಾರೆ. ಹಿಂದುಳಿದ ಸಮುದಾಯಗಳಿಗೆ ನ್ಯಾಯ ಒದಗಿಸಬೇಕು ಎಂಬ ನಿಟ್ಟಿನಲ್ಲಿ ಈವರೆಗೆ ಹತ್ತು ಸಮಿತಿಗಳಾಗಿವೆ. ಕೆಲವು ಸಮಿತಿಗಳು ಸಮೀಕ್ಷೆ ಮಾಡಿವೆ. ಕೆಲವು ಸಮಿತಿಗಳು ಮಾದರಿ ದತ್ತಾಂಶ ಸಂಗ್ರಹಿಸಿ ವರದಿ ನೀಡಿವೆ ಎಂದು ಸ್ಪಷ್ಟಪಡಿಸಿದರು.

ಪ್ರತಿಯೊಂದು ಸಮುದಾಯವನ್ನು ಗಮನದಲ್ಲಿಟ್ಟು ಸರ್ಕಾರ ಅಂತಿಮವಾಗಿ ತೀರ್ಮಾನ ತೆಗೆದುಕೊಳ್ಳಲಿದೆ ಎಂದು ಹೇಳಿದರು.

ಇದೇ ವೇಳೆ ಉದ್ಯಮಿ ರಿಕ್ಕಿ ರೈ ಮೇಲೆ ಗುಂಡಿನ ದಾಳಿ ಪ್ರಕರಣದ ಕುರಿತು ಪ್ರತಿಕ್ರಿಯಿಸಿ, ಇಂತಹ ಘಟನೆಗಳನ್ನು ನಿಯಂತ್ರಿಸಲು ಕ್ರಮ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದರು.

<><*<><>*><>

ನಿವೃತ್ತ ಡಿಜಿಪಿ ಓಂ ಪ್ರಕಾಶ್ ಹತ್ಯೆ ಪ್ರಕರಣದ ತನಿಖೆ ನಡೆಯುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಓಂ ಪ್ರಕಾಶ್ ಪತ್ನಿಯ ವಿಚಾರಣೆ ನಡೆಯುತ್ತಿದೆ ಎಂದು ಹೇಳಿದರು.

ಧ್ವನಿ: ಡಾ.ಜಿ.ಪರಮೇಶ್ವರ್ ( ೨೮  ಸೆಕೆಂಡ್ಸ್)

ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಪತ್ನಿ ಹಾಗೂ ಪುತ್ರಿಯನ್ನು ವಿಚಾರಣೆಗೆ ಒಳಪಡಿಸಿದ್ದಾರೆ. ಪ್ರಾಥಮಿಕ ತನಿಖೆಯಲ್ಲಿ ಪತ್ನಿಯಿಂದಲೇ ಹತ್ಯೆಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಬಿಹಾರದ ಚಂಪಾರಣ್ ಮೂಲದವರಾಗಿದ್ದ ೬೮ ವರ್ಷದ ಓಂ ಪ್ರಕಾಶ್ ೧೯೮೧ರ ನ ಐಪಿಎಸ್ ಅಧಿಕಾರಿಯಾಗಿದ್ದು ಬೆಂಗಳೂರಿನ ಎಚ್‌ಎಸ್‌ಆರ್ ಲೇಔಟ್ ನಲ್ಲಿ ವಾಸವಾಗಿದ್ದರು. ಕರ್ನಾಟಕ ಗೃಹರಕ್ಷಕದಳ, ಅಗ್ನಿಶಾಮಕದಳಗಳಲ್ಲಿ ಮಹಾನಿರ್ದೇಶಕರಾಗಿದ್ದ ಅವರು, ೨೦೧೫ರಿಂದ ೨೦೧೭ರವರೆಗೂ ರಾಜ್ಯ ಪೊಲೀಸ್ ಮಹಾ ನಿರ್ದೇಶಕರಾಗಿಯೂ ಸೇವೆ ಸಲ್ಲಿಸಿದ್ದರು.

<><*<><>*><>

ಬಿಜೆಪಿಯ ೧೮ ಶಾಸಕರ ಅಮಾನತು ಪ್ರಕರಣವನ್ನು ಹಿಂಪಡೆಯುವಂತೆ ಪ್ರತಿಪಕ್ಷ ನಾಯಕ ಆರ್.ಅಶೋಕ ನೇತೃತ್ವದಲ್ಲಿ ಬಿಜೆಪಿ ಶಾಸಕರು ಸಭಾಧ್ಯಕ್ಷ ಯು.ಟಿ.ಖಾದರ್ ಅವರನ್ನು ವಿಧಾನಸೌಧದಲ್ಲಿಂದು ಭೇಟಿ ಮಾಡಿ ಮನವಿ ಸಲ್ಲಿಸಿದ್ದಾರೆ.

ಬಳಿಕ ಮಾತನಾಡಿದ ಪ್ರತಿಪಕ್ಷ ನಾಯಕ ಆರ್.ಅಶೋಕ, ಉದ್ದೇಶಪೂರ್ವಕವಾಗಿ ವಿಧಾನಸಭೆಯಲ್ಲಿ ಗದ್ದಲ ಉಂಟು ಮಾಡಿಲ್ಲ ಎಂದು ತಿಳಿಸಿದ್ದಾರೆ. ಸಭಾಧ್ಯಕ್ಷರಿಗೆ ಅಗೌರವ ತೋರುವ ಉದ್ದೇಶ ಹೊಂದಿರಲಿಲ್ಲ. ಸಿಡಿ ವಿಚಾರ ಕುರಿತಂತೆ ಪ್ರತಿಭಟನೆ ನಡೆಸಲಾಗಿತ್ತು ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಬೆಲೆ ಏರಿಕೆ ವಿರುದ್ಧ ಬಿಜೆಪಿ ನಡೆಸುತ್ತಿರುವ ಮೂರನೇ ಹಂತದ ಜನಾಕ್ರೋಶ ಯಾತ್ರೆ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ದಾವಣಗೆರೆಯಲ್ಲಿಂದು ನಡೆಯಿತು. ಯಾತ್ರೆಯನ್ನುದ್ದೇಶಿಸಿ ಮಾತನಾಡಿದ ಸಂಸದ ಗೋವಿಂದ ಕಾರಜೋಳ ರಾಜ್ಯ ಸರ್ಕಾರ ಒಳಮೀಸಲಾತಿ ಜಾರಿಗೆ ತರಬೇಕಾಗುತ್ತದೆ ಎಂದು ಜಾತಿ ಗಣತಿಯನ್ನು ಮುನ್ನೆಲೆಗೆ ತಂದಿದೆ ಎಂದು ಆರೋಪಿಸಿದ್ದಾರೆ. ಇದಕ್ಕೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಬಿ.ವೈ.ವಿಜಯೇಂದ್ರ, ಗ್ಯಾರಂಟಿಗಳ ಭ್ರಮೆಯಲ್ಲಿರುವ ಮುಖ್ಯಮಂತ್ರಿಗಳು ವಾಸ್ತವಿಕ ಸತ್ಯವನ್ನು ಈಗಲಾದರೂ ಅರ್ಥ ಮಾಡಿಕೊಳ್ಳಬೇಕು ಎಂದು ಹೇಳಿದ್ದಾರೆ. ಜಾತಿ ಜನಗಣತಿ ಮೂಲಕ ಜಾತಿಗಳ ನಡುವೆ ಸರ್ಕಾರ ವಿಷಬೀಜ ಬಿತ್ತಲು ಹೊರಟಿದೆ ಎಂದು ದೂರಿದ್ದಾರೆ.

<><*<><>*><>

ಕ್ಯಾಥೋಲಿಕ್ ಧರ್ಮದ ಧರ್ಮಗುರು ಪೋಪ್‌ಫ್ರಾನ್ಸಿಸ್ ವ್ಯಾಟಿಕನ್ ನಗರದಲ್ಲಿ ಇಂದು ಬೆಳಿಗ್ಗೆ ೭:೩೫ ಕ್ಕೆ ಇಹಲೋಕ ತ್ಯಜಿಸಿದರು ಎಂದು ವ್ಯಾಟಿಕನ್ ಪ್ರಕಟಣೆ ತಿಳಿಸಿದೆ. ಅವರಿಗೆ ೮೮ ವರ್ಷ ವಯಸ್ಸಾಗಿತ್ತು. ದೀರ್ಘ ಕಾಲದ ಅನಾರೋಗ್ಯದಿಂದ ಬಳಲುತ್ತಿದ್ದ ಫ್ರಾನ್ಸಿಸ್ ಅವರನ್ನು ಇತ್ತೀಚೆಗೆ ನ್ಯುಮೋನಿಯಾದಿಂದ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಪೋಪ್‌ಫ್ರಾನ್ಸಿಸ್ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂತಾಪ ಸೂಚಿಸಿದ್ದಾರೆ. ಇವರ ಬದುಕು ವಿಶ್ವದ ಎಲ್ಲಾ ನಾಗರಿಕರಿಗೆ ಮಾದರಿಯಾಗಿತ್ತು ಎಂದು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ತಿಳಿಸಿದ್ದಾರೆ.

<><*<><>*><>

ಮಂಡ್ಯ ಜಿಲ್ಲೆಯಲ್ಲಿ ಹಾಲು ಉತ್ಪಾದಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಒಕ್ಕೂಟವು ಹಲವಾರು ಸೌಲಭ್ಯಗಳನ್ನು ಒದಗಿಸುತ್ತಿದ್ದು ಇದರ ಸದುಪಯೋಗ ಪಡೆದುಕೊಳ್ಳುವಂತೆ ಮಂಡ್ಯ ಜಿಲ್ಲಾ ಹಾಲು ಒಕ್ಕೂಟದ ನಿರ್ದೇಶಕ ಎಸ್.ಪಿ.ಸ್ವಾಮಿ ತಿಳಿಸಿದ್ದಾರೆ. ಮಂಡ್ಯ ಜಿಲ್ಲೆಯ ಸೀನಪ್ಪನದೊಡ್ಡಿ ಗ್ರಾಮದಲ್ಲಿ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನೂತನವಾಗಿ ನಿರ್ಮಿಸಿರುವ ಶುದ್ಧ ಕುಡಿಯುವ ನೀರಿನ ಘಟಕ ಅನಾವರಣಗೊಳಿಸಿ ಮಾತನಾಡಿದ ಅವರು, ಸ್ಥಳೀಯ ನಿವಾಸಿಗಳು ಇದರ ಅನುಕೂಲ ಪಡೆಯುವಂತೆ ಹೇಳಿದ್ದಾರೆ.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇಂದಿನಿಂದ ಜೂನ್ ೪ ರವರೆಗೆ ನಡೆಯಲಿರುವ ೭ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಅಭಿಯಾನ ಮತ್ತು ಚರ್ಮ ಗಂಟು ರೋಗದ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಜಿಲ್ಲೆಯಲ್ಲಿ ೧ ಲಕ್ಷದ ೭೦ ಸಾವಿರದ ೭೨೨ ದನಗಳು ಹಾಗೂ ೧೬ ಸಾವಿರ ೯೨೪ ಎಮ್ಮೆಗಳಿದ್ದು, ಒಟ್ಟು ೧ ಲಕ್ಷದ ೮೭ ಸಾವಿರದ ೬೪೬ ಜಾನುವಾರುಗಳಿಗೆ ಕಾಲುಬಾಯಿ ರೋಗ ಲಸಿಕೆ ಹಾಕುವ ಗುರಿಯನ್ನು ಬಮೂಲ್ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಗಿದೆ ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಜಿಲ್ಲಾ ಉಪನಿರ್ದೇಶಕರಾದ ಡಾ.ಜಗದೀಶ್ ತಿಳಿಸಿದ್ದಾರೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು…

೧. ಬೆಂಗಳೂರಿನಲ್ಲಿ ಸೋಮವಾರ ಕಿಯೋನಿಕ್ಸ್ ಸಂಸ್ಥೆಯ ಇ-ಕಾಮರ್ಸ್ ಪೋರ್ಟಲ್ ಅನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಉದ್ಘಾಟಿಸಿದರು.

೨. ಕೆಪಿಸಿಸಿ ಅಧ್ಯಕ್ಷ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಶಾಸಕ ನಾರಾಯಣಸ್ವಾಮಿ ಸಮ್ಮುಖದಲ್ಲಿ ಬಂಗಾರಪೇಟೆ ಜೆಡಿಎಸ್ ನಾಯಕ ಎಂ.ಮುನಿರಾಜು ಹಾಗೂ ಬಿಜೆಪಿ ಮುಖಂಡ ಕೆ.ಚೆನ್ನಾರೆಡ್ಡಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿದ್ದಾರೆ.

೩. ಬಿಎಸ್‌ಎನ್‌ಎಲ್ ಗ್ರಾಹಕರ ಸೇವಾ ಶಿಬಿರ ಭಾರತ್ ಸಂಚಾರ್ ನಿಗಮವು ಏಪ್ರಿಲ್ ಮಾಹೆಯನ್ನು 'ಕನೆಕ್ಟಿಂಗ್ ವಿಥ್ ಕೇರ್' ಎಂಬ ಥೀಮ್ ನೊಂದಿಗೆ ಗ್ರಾಹಕ ಸೇವಾ ಮಾಸವನ್ನಾಗಿ ಆಚರಿಸುತ್ತಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>